# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | : | 285 |
| **ಮಾನ್ಯ ಸದಸ್ಯರ ಹೆಸರು** | : | ಶ್ರೀ ಪ್ರಕಾಶ್ ಕೆ.ರಾಥೋಡ್ (ನಾಮನಿರ್ದೇಶನ ಹೊಂದಿದವರು) |
| **ಉತ್ತರಿಸಬೇಕಾದ ದಿನಾಂಕ** | : | 15-02-2024 |
| **ಉತ್ತರಿಸುವ ಸಚಿವರು** | : | ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಪ್ರವಾಸೋದ್ಯಮ ಅಭಿವೃದ್ಧಿಗೆ ಹೆಲಿ ಟೂರಿಜಮ್ ವ್ಯವಸ್ಥೆಯನ್ನು ಕಲ್ಪಿಸಲು ಯೋಜಿಸಲಾಗಿದೆಯೇ; | ರಾಜ್ಯದಲ್ಲಿ ಹೆಲಿಕಾಪ್ಟರ್ ಸಾರಿಗೆ ಸೇವೆಗಳನ್ನು ಸಕ್ರಿಯಗೊಳಿಸುವ ಮೂಲಕ ಪ್ರವಾಸೋದ್ಯಮವನ್ನು ಇನ್ನಷ್ಟು ಉತ್ತೇಜಿಸುವ ಉದ್ದೇಶದಿಂದ ಹಾಗೂ ಹೆಲಿ ಟೂರಿಸಂ ಅಭಿವೃದ್ಧಿಗಾಗಿ ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮ (ಕೆ.ಎಸ್.ಟಿ.ಡಿ.ಸಿ.)ವನ್ನು ನೋಡಲ್ ಏಜೆನ್ಸಿಯಾಗಿ ನಿಯೋಜಿಸಲಾಗಿದ್ದು, ಕೆ.ಎಸ್.ಟಿ.ಡಿ.ಸಿ. ನಿಗಮದ ವತಿಯಿಂದ ರಾಜ್ಯದಲ್ಲಿ ಕಡಿಮೆ ಅಂತರದಲ್ಲಿ ಹೆಲಿಕಾಪ್ಟರ್ ಪ್ರವಾಸೋದ್ಯಮ ಮತ್ತು ಸಾರಿಗೆ ಸಂಬಂಧಿತ ಸೇವೆಗಳನ್ನು ಒದಗಿಸಲು ಹೆಲಿಕಾಪ್ಟರ್ ಸೇವಾ ಪೂರೈಕೆದಾರರನ್ನು 2020-21ನೇ ಸಾಲಿನಲ್ಲಿ Expression of Interest (EOI) ಅನ್ನು ಆಹ್ವಾನಿಸಿದ್ದು, ಈ ಕೆಳಕಂಡ ಸಂಸ್ಥೆಗಳೊಂದಿಗೆ ಕಳೆದ ಜನವರಿ-2022 ರಲ್ಲಿ 05 ವರ್ಷಗಳ ಅವಧಿಗೆ ಒಪ್ಪಂದ ಮಾಡಿಕೊಳ್ಳಲಾಗಿರುತ್ತದೆ.<br>1. ಮೆ: ತುಂಬಿ ಏವಿಯೇಷನ್ಸ್ ಪ್ರೈ.ಲಿ, ತಿರುವನಂತಪುರಂ.<br>2. ಮೆ: ಚಿಪ್ಸನ್ ಏವಿಯೇಷನ್ಸ್ ಪ್ರೈ.ಲಿ, ನವದೆಹಲಿ. |
| ಆ) | ಹೆಲಿ ಟೂರಿಜಮ್‌ನ್ನು ರಾಜ್ಯದ ಯಾವ ಯಾವ ಜಿಲ್ಲೆಗಳಿಗೆ ಪ್ರಾರಂಭಿಸಲು ಯೋಜಿಸಲಾಗಿದೆ; | ಸದರಿ ಹೆಲಿ ಟೂರಿಸಂ ಯೋಜನೆಯು ಪ್ರಾಥಮಿಕ ಹಂತದಲ್ಲಿದ್ದು, ಈ ಪ್ರಾಥಮಿಕ ಹಂತದಲ್ಲಿ ಬೆಂಗಳೂರು, ಬಳ್ಳಾರಿ-ಹಂಪಿ, ಕೊಡಗು, ಮೈಸೂರು-ಕಬಿನಿ, ದಕ್ಷಿಣ ಕನ್ನಡ ಜಿಲ್ಲೆ (ಧರ್ಮಸ್ಥಳ, ಮಂಗಳೂರು)ಗಳ ಸಂಭಾವ್ಯ ಮಾರ್ಗಗಳಲ್ಲಿ ಪ್ರಾರಂಭಿಸಲು ಯೋಜಿಸಲಾಗಿದ್ದು, ಮುಂಬರುವ ದಿನಗಳಲ್ಲಿ ಪ್ರಮುಖ ಪ್ರವಾಸಿ ಸ್ಥಳಗಳನ್ನು ಒಳಗೊಂಡಂತೆ ಸರ್ಕ್ಯೂಟ್ ರಚಿಸಲು ಸಭೆ ನಡೆಸಿ ಮಾರ್ಗಪಟ್ಟಿಯನ್ನು ಅಂತಿಮಗೊಳಿಸಿ, ಅಗತ್ಯ ಕ್ರಮ ವಹಿಸಲು ಹೆಲಿ ಟೂರಿಸಂ ಸೇವಾ ಪೂರೈಕೆದಾರರಿಗೆ ತಿಳಿಸಲಾಗಿರುತ್ತದೆ. |
| ಇ) | ಇದರಿಂದ ರಾಜ್ಯ, ರಾಷ್ಟ್ರ ಹಾಗೂ ವಿದೇಶಿಗರಿಗೆ ಅನುಕೂಲವಾಗುವುದರಿಂದ, ಹೆಲಿಟೂರಿಜಮ್ ಜೊತೆಗೆ ವಾಸ್ತವ್ಯಕ್ಕೆ ಅನುಕೂಲವಾಗುವಂತೆ ಪ್ರವಾಸಿ ಮಂದಿರಗಳ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು? | ಬಂದಿದೆ.<br><br>ಸದರಿ ಯೋಜನೆಯಡಿ ಪರಿಗಣಿಸಿರುವ ಪ್ರವಾಸಿ ತಾಣಗಳಲ್ಲಿ ಪ್ರವಾಸಿಗರಿಗೆ ವಾಸ್ತವ್ಯಕ್ಕೆ ಅನುಕೂಲವಾಗುವಂತೆ ಹಲವು ಪ್ರವಾಸಿ ಮಂದಿರಗಳಿದ್ದು, ಮುಂಬರುವ ದಿನಗಳಲ್ಲಿ ಗುರುತಿಸಲಾಗುವ ಪ್ರವಾಸಿ ಸ್ಥಳಗಳಲ್ಲಿ ಹಾಗೂ ಈಗಾಗಲೇ ಗುರುತಿಸಲಾಗಿರುವ ಪ್ರವಾಸಿ ತಾಣಗಳಲ್ಲಿ ಪ್ರವಾಸಿಗರಿಗೆ ಅನುಕೂಲವಾಗುವಂತಹ Basic amenities ಗಳನ್ನು ಒದಗಿಸಲು ಪರಿಶೀಲಿಸಿ, ಆಯವ್ಯಯದಲ್ಲಿ ಒದಗಿಸಿರುವ ಅನುದಾನದ ಲಭ್ಯತೆಗೆ ಅನುಗುಣವಾಗಿ ಮೂಲಸೌಲಭ್ಯಗಳನ್ನು ಒದಗಿಸಲು ಪರಿಶೀಲಿಸಲಾಗುವುದು. |

TOR 47 TDV 2024

16.2

**(ಎಚ್.ಕೆ.ಪಾಟೀಲ)**
ಕಾನೂನು, ನ್ಯಾಯ, ಮಾನವ ಹಕ್ಕುಗಳು,
ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ
ಹಾಗೂ ಪ್ರವಾಸೋದ್ಯಮ ಸಚಿವರು.

ಎಚ್.ಕೆ ಪಾಟೀಲ
ಕಾನೂನು, ನ್ಯಾಯ, ಮಾನವ ಹಕ್ಕುಗಳು
ಸಂಸದೀಯ ವ್ಯವಹಾರಗಳು, ಶಾಸನ ರಚನೆ
ಹಾಗೂ ಪ್ರವಾಸೋದ್ಯಮ ಸಚಿವರು